ದಿನಾಂಕಃ 08-04-2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

**ಮುಂದುವರೆದ ಮುಖ್ಯ ವಿಚಾರಣೆಃ** ಪ್ರತಿವಾದಿ ಪರ ವಕೀಲರಿಂದ,

1) ಹೆಬ್ಬಾಳು ಗ್ರಾಮದ ಸರ್ವೇ ನಂ, 6 ಆಸ್ತಿಯ ಕೈ ಬರವಣಿಗೆಯ ಪಹಣಿ ಪತರಕೆಯನ್ನು ಹಾಜರುಪಡಿಸಿರುತ್ತೇನೆ. ಸದರಿ ದಾಖಲೆಯನ್ನು ನಿಪಿ-31 ಎಂದು ಗುರುತಿಸಲಾಯಿತು.

2) ಹೆಬ್ಬಾಳು ಗ್ರಾಮದ ಸರ್ವೇ ನಂ, 7/1 ಆಸ್ತಿಯ ಕೈ ಬರವಣಿಗೆಯ ಪಹಣಿ ಪತ್ರಿಕೆಯನ್ನು ಹಾಜರುಪಡಿಸಿರುತ್ತೇನೆ. ಸದರಿ ದಾಖಲೆಯನ್ನು ನಿಪಿ-32 ಎಂದು ಗುರುತಿಸಲಾಯಿತು.

3) ಹೆಬ್ಬಾಳು ಗ್ರಾಮದ ಸರ್ವೇ ನಂ. 21 ಆಸ್ತಿಯ ನಾಲ್ಕು ಕೈ ಬರವಣಿಗೆಯ ಪಹಣಿ ಪತ್ರಿಕೆಯನ್ನು ಹಾಜರುಪಡಿಸಿರುತ್ತೇನೆ. ಸದರಿ ದಾಖಲೆಯನ್ನು ನಿಪಿ-33 ರಿಂದ 36 ಎಂದು ಗುರುತಿಸಲಾಯಿತು.

4) ಹೆಬ್ಬಾಳು ಗ್ರಾಮದ ಸರ್ವೇ ನಂ. 37 ಆಸ್ತಿಯ ಕೈ ಬರವಣಿಗೆಯ ಪಹಣಿ ಪತ್ರಿಕೆಯನ್ನು ಹಾಜರುಪಡಿಸಿರುತ್ತೇನೆ. ಸದರಿ ದಾಖಲೆಯನ್ನು ನಿಪಿ-37 ಎಂದು ಗುರುತಿಸಲಾಯಿತು.

5) ಹೆಬ್ಬಾಳು ಗ್ರಾಮದ ಸರ್ವೇ ನಂ. 19 ಆಸ್ತಿಯ ಕೈ ಬರವಣಿಗೆಯ ಐದು ಪಹಣಿ ಪತ್ರಿಕೆಯನ್ನು ಹಾಜರುಪಡಿಸಿರುತ್ತೇನೆ. ಸದರಿ ದಾಖಲೆಯನ್ನು ನಿಪಿ-38 ರಿಂದ 42 ಎಂದು ಗುರುತಿಸಲಾಯಿತು.

7) ಹೆಬ್ಬಾಳು ಗ್ರಾಮದ ಸರ್ವೇ ನಂ. 39 ಆಸ್ತಿಯ ಕೈ ಬರವಣಿಗೆಯ ಎರಡು ಪಹಣಿ ಪತ್ರಿಕೆಯನ್ನು ಹಾಜರುಪಡಿಸಿರುತ್ತೇನೆ. ಸದರಿ ದಾಖಲೆಯನ್ನು ನಿಪಿ-43 ಮತ್ತು 44 ಎಂದು ಗುರುತಿಸಲಾಯಿತು.

8) ಹೆಬ್ಬಾಳು ಗ್ರಾಮದ ಸರ್ವೇ ನಂ. 4/2 ಆಸ್ತಿಯ ಕೈ ಬರವಣಿಗೆಯ ಪಹಣಿ ಪತ್ರಿಕೆಯನ್ನು ಹಾಜರುಪಡಿಸಿರುತ್ತೇನೆ. ಸದರಿ ದಾಖಲೆಯನ್ನು ನಿಪಿ-45 ಎಂದು ಗುರುತಿಸಲಾಯಿತು.

7) ಮ್ಯುಟೇಷನ್ ದೃಡೀಕೃತ ಪ್ರತಿಯನ್ನು ಹಾಜರುಪಡಿಸಿರುತ್ತೇನೆ. ಸದರಿ ದಾಖಲೆಯನ್ನು ನಿಪಿ-46 ಎಂದು ಗುರುತಿಸಲಾಯಿತು.

8) ಇಂಡೇಕ್ಸ ಆಫ್ ಲ್ಯಾಂಡ್ ಹಾಜರುಪಡಿಸಿರುತ್ತೇನೆ. ಸದರಿ ದಾಖಲೆಯನ್ನು ನಿಪಿ 47 ಎಂದು ಗುರುತಿಸಲಾಯಿತು.

9) ರೆಕಾರ್ಡ್ಸ ಆಫ್ ರೈಟ್ಸ ಹಾಜರುಪಡಿಸಿರುತ್ತೇನೆ. ಸದರಿ ದಾಖಲೆಯನ್ನು ನಿಪಿ 48 ಎಂದು ಗುರುತಿಸಲಾಯಿತು.

10) ವಂಶವೃಕ್ಷ ಪ್ರಮಾಣ ಪತ್ರವನ್ನು ಹಾಜರುಪಡಿಸಿರುತ್ತೇನೆ. ಸದರಿ ದಾಖಲೆಯನ್ನು ನಿಪಿ 49 ಎಂದು ಗುರುತಿಸಲಾಯಿತು.

11) ನನ್ನ ತಾಯಿಯ ಮರಣ ಪ್ರಮಾಣ ಪತ್ರವನ್ನು ಹಾಜರುಪಡಿಸಿರುತ್ತೇನೆ. ಸದರಿ ದಾಖಲೆಯನ್ನು ನಿಪಿ 50 ಎಂದು ಗುರುತಿಸಲಾಯಿತು.

12) ಹೆಬ್ಬಾಳು ಗ್ರಾಮ ಪಂಚಾಯತಿ ಕಾರ್ಯದರ್ಶಿಯವರು ನೀಡಿರುವ ಡಿಮ್ಯಾಂಡ ರಿಜಿಸ್ಟರ್ 2 ಪ್ರತಿಗಳನ್ನು ಹಾಜರುಪಡಿಸಿರುತ್ತೇನೆ. ಸದರಿ ದಾಖಲೆಗಳನ್ನು ನಿಪಿ 51 ಮತ್ತು 52 ಎಂದು ಗುರುತಿಸಲಾಯಿತು.

13) ತೆರಿಗೆ ಪಾವತಿ ಮಾಡಿರುವ ರಶೀತಿಯನ್ನು ಹಾಜರುಪಡಿಸಿರುತ್ತೇನೆ. ಸದರಿ ದಾಖಲೆಯನ್ನು ನಿಪಿ 53 ಎಂದು ಗುರುತಿಸಲಾಯಿತು.

**ಪಾಟೀ ಸವಾಲುಃ** ಪ್ರತಿವಾದಿ ಪರ ವಕೀಲರಿಂದ

ನನ್ನ ಸಹೋದರ ರಾಜೇಗೌಡ ರವರು ಅಸಲು ದಾವೆ 366/1989 ರಂತೆ ದಾವೆ ಸಲ್ಲಿಸಿದ್ದರು ಎಂದರೆ ಸರಿಯಲ್ಲ. ಸದರಿ ದಾವೆಯಲ್ಲಿ ನನ್ನ ಸಹೋದರ ಮತ್ತು ನನ್ನ ತಂದೆ ದಿಃ 13/03/1990 ರಂದು ರಾಜಿ ಆಗಿರುತ್ತಾರೆ ಎಂದರೆ ಸರಿಯಲ್ಲ. ಅಸಲು ದಾವೆ 366/1989 ದಾವೆಯಲ್ಲಿ ದಾವಾ ಸ್ವತ್ತುಗಳು ಮತ್ತು ಪ್ರಸ್ತುತ ದಾವಾ ಸ್ವತ್ತುಗಳು ಒಂದೇ ಆಗಿರುತ್ತವೆ ಎಂದರೆ ನನಗೆ ಗೊತ್ತಿಲ್ಲ. ಸಾಕ್ಷಿ ಮುಂದುವರೆದು ಉಳಿಕೆ ಆಸ್ತಿಗಳ ಮೇಲೆ ಈ ದಾವೆ ಸಲ್ಲಿಸಿರುತ್ತೇನೆ ಎಂದು ನುಡಿಯುತ್ತಾರೆ. ಅಸಲು ದಾವೆ 366/1989

ರಾಜಿ ಅರ್ಜಿಯಂತೆ ನನ್ನ ಸಹೋದರ ಹೆಸರಿಗೆ ಕಂದಾಯ ದಾಖಲಾತಿಗಳು ನಮೂದು ಆಗಿರುತ್ತವೆ ಎಂದರೆ ಸರಿಯಲ್ಲ. ದಾವಾ ಸ್ವತ್ತಗಳ ಸಂಬಂಧಿಸಿದಂತೆ ಈಗಾಗಲೇ ಅಸಲು ದಾವೆ 366/1989 ರಾಜಿ ಆಗಿರುವುದರಿಂದ ನನಗೆ ದಾವಾ ಸ್ವತ್ತಿನಲ್ಲಿ ಯಾವುದೇ ಭಾಗಾಂಶ ಹಕ್ಕು ಇರುವುದಿಲ್ಲ ಎಂದರೆ ಸರಿಯಲ್ಲ. ಮನೆಗೆ ಸಂಬಂಧಸಿದ ಆಸ್ತಿಗಳು ಸಹ ಈಗಾಗಲೇ ಮೇಲ್ಕಂಡ ದಾವೆಯಲ್ಲಿ ಇತ್ಯರ್ಥ ಆಗಿರುತ್ತದೆ ಎಂದರೆ ಸರಿಯಲ್ಲ. ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

ಮರುವಿಚಾರಣೆಃ ಇಲ್ಲ

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿ ಹೇಳಿದನ್ನು ಬೆರಳಚ್ಚುಗಾರರಿಗೆ ಉಕ್ತಲೇಖನ ನೀಡಿ ಬೆರಳಚ್ಚು ಮಾಡಿಸಲಾಯಿತು)

ಓ ಹೇ.ಕೇ.ಸ.ಇ.ಒ.,

ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರದನ್ಯಾದಂ., ಕೆ.ಆರ್.ನಗರ